ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಬಹಿರ್ದೆಸೆ ವಿಮುಕ್ತ ಯೋಜನೆಯ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1399 (1657) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರವು ರಾಜ್ಯವನ್ನು ಬಹಿರ್ದೆಸೆ ವಿಮುಕ್ತ ರಾಜ್ಯವನ್ನಾಗಿ ಮಾಡುವ ಯೋಜನೆ ಹಾಕಿಕೊಂಡಿದ್ದು, ಇದನ್ನು ಅನುಷ್ಠಾನಕ್ಕೆ ತರಲಾಗಿದೆಯೇ ;

(ಆ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಅಳವಡಿಸಲಾಗಿದೆ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ ಬಂದ ಹಣವೆಷ್ಟು ;

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮಾಡಲಾದ ಖರ್ಚಿನ ಜಿಲ್ಲಾವಾರು ಮಾಹಿತಿ ಒದಗಿಸುವುದು ?